# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.04.2024 / 18.40 hrs**

<u>ಮುಖ್ಯಾಂಶಗಳು</u>

೧. ಅಭಿವೃದ್ಧಿ ವಿಚಾರದಲ್ಲಿ ರಾಜ್ಯಗಳಿಗೆ ಸಮಾನ ಅವಕಾಶ - ಅಮಿತ್ ಶಾ

೨. ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಅಗತ್ಯ ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಪೊಲೀಸ್ ಧ್ವಜ ದಿನಾಚರಣೆ ; ಶಾಂತಿ, ಸುವ್ಯವಸ್ಥೆ ಪೊಲೀಸರ ಹೊಣೆ

೪. ಇಂದು ೩೮ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ ; ಜಿಲ್ಲೆಗಳಲ್ಲಿ ಬಿರುಸುಗೊಂಡ ಪ್ರಚಾರ

೫. ಐಪಿಎಲ್ ಟಿ-೨೦ ಕ್ರಿಕೆಟ್ : ರಾಯಲ್ ಚಾಲೆಂಜರ್ಸ್ ಬೆಂಗಳೂರು-ಲಖನೌ ಸೂಪರ್ ಜೈಂಟ್ಸ್ ತಂಡಗಳ ಹಣಾಹಣಿ

**<><*<><>*><>**

ಅಭಿವೃದ್ಧಿ ವಿಚಾರದಲ್ಲಿ ಯಾವುದೇ ರಾಜ್ಯಗಳಿಗೆ ತಾರತಮ್ಯ ಮಾಡಿಲ್ಲ ಎಂದು ಬಿಜೆಪಿ ಹಿರಿಯ ನಾಯಕ ಕೇಂದ್ರ ಸಚಿವ ಅಮಿತ್ ಶಾ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಏರ್ಪಡಿಸಿದ್ದ ಬಿಜೆಪಿ ಸಮಾವೇಶವನ್ನು ಉದ್ದೇಶಿಸಿ ಅವರು ಮಾತನಾಡಿದರು. ಯುಪಿಎ ಅವಧಿಯಲ್ಲಿ ರಾಜ್ಯಕ್ಕೆ ೧೦ ವರ್ಷದಲ್ಲಿ ಒಂದು ಲಕ್ಷ ೪೨ ಸಾವಿರ ಕೋಟಿ ನೀಡಿದ್ದರೆ, ಎನ್‌ಡಿಎ ಅವಧಿಯ ೧೦ ವರ್ಷದಲ್ಲಿ ೪ ಲಕ್ಷ ೬೧ ಸಾವಿರ ಕೋಟಿ ನೀಡಲಾಗಿದೆ. ಬಿಜೆಪಿ ಅಭಿವೃದ್ಧಿ ವಿಚಾರದಲ್ಲಿ ಮತಯಾಚನೆ ಮಾಡಲಿದೆ ಎಂದು ಅವರು ಸ್ಪಷ್ಟಪಡಿಸಿದರು. ೨೦೧೪ರಲ್ಲಿ ಬಿಜೆಪಿಗೆ ಶೇಕಡ ೪೩ ರಷ್ಟು ಮತ ಲಭಿಸಿತ್ತು. ತದನಂತರ ೨೦೧೯ರ ಲೋಕಸಭಾ ಚುನಾವಣೆಯಲ್ಲಿ ಮತ ಪ್ರಮಾಣ ಶೇಕಡ ೫೧ಕ್ಕೆ ಹೆಚ್ಚಳವಾಗಿ ೨೫ ಕ್ಷೇತ್ರಗಳಲ್ಲಿ ಜಯ ಸಾಧಿಸಲಾಗಿತ್ತು ಎಂದರು. ಸಮಾವೇಶದಲ್ಲಿ ಪಕ್ಷದ ಹಿರಿಯ ನಾಯಕರಾದ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಶೋಭಾ ಕರಂದ್ಲಾಜೆ, ಪ್ರಲ್ಹಾದ್ ಜೋಶಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಚುನಾವಣಾ ಅಭ್ಯರ್ಥಿಗಳಾದ ಪಿ.ಸಿ. ಮೋಹನ್, ಸಿ.ಎನ್. ಮಂಜುನಾಥ್, ತೇಜಸ್ವಿ ಸೂರ್ಯ, ಡಾ. ಕೆ. ಸುಧಾಕರ್ ಮೊದಲಾದವರು ಹಾಜರಿದ್ದರು.

**<><*<><>*><>**

ರಾಜ್ಯದ ಯಾವುದೇ ಭಾಗದಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೆರಿಗೆ ಹಣದಲ್ಲಿ ರಾಜ್ಯಕ್ಕೆ ನ್ಯಾಯಯುತವಾಗಿ ಸಲ್ಲಬೇಕಾಗಿರುವ ಪಾಲಿನ ಹಣವನ್ನು ಕೇಂದ್ರ ಸರ್ಕಾರ ನೀಡುತ್ತಿಲ್ಲ ಎಂದು ಮುಖ್ಯಮಂತ್ರಿ ಅಸಮಾಧಾನ ಹೊರ ಹಾಕಿದರು.

**<><*<><>*><>**

ರಾಜ್ಯಾದ್ಯಂತ ಇಂದು ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮ ನಡೆಯಿತು. ರಾಜಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪೊಲೀಸ್ ಧ್ವಜ ದಿನಾಚರಣೆ ಪ್ರಯುಕ್ತ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಶುಭ ಕೋರಿದರು. ಸಮಾಜದಲ್ಲಿ ಶಾಂತಿ ಕಾಪಾಡುವಲ್ಲಿ ಪೊಲೀಸರ ಪಾತ್ರ ಬಹಳ ಮುಖ್ಯವಾದದ್ದು ಎಂದು ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್ ಹೇಳಿದ್ದಾರೆ. ನಿವೃತ್ತ ಪೊಲೀಸ್ ಸಿಬ್ಬಂದಿಗಳಿಗೆ ಗೌರವ ಸಲ್ಲಿಸುವುದು ಮತ್ತು ಅವರ ಸೇವೆ ಸ್ಮರಿಸುವುದು ಈ ದಿನದ ವಿಶೇಷವಾಗಿದೆ ಎಂದರು.

ಚಿಕ್ಕಮಗಳೂರು ನಗರದ ರಾಮನಹಳ್ಳಿ ಪೊಲೀಸ್ ಕವಾಯತು ಮೈದಾನದಲ್ಲಿ ಇಂದು ಪೊಲೀಸ್ ಧ್ವಜ ದಿನಾಚರಣೆ ನಡೆಯಿತು. ನಿವೃತ್ತ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಯೋಗೇಂದ್ರನಾಥ್. ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗೋಪಾಲ ಕೃಷ್ಣ ಮೊದಲಾದವರು ಭಾಗವಹಿಸಿದ್ದರು.

ಬಾಗಲಕೋಟೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನಿವೃತ್ತ ಡಿ.ಎಸ್.ಪಿ ರವೀಂದ್ರ ಶಿರೂರ ಮಾತನಾಡಿ, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರ ಪಾತ್ರ ಮಹತ್ತರವಾದದ್ದು ಎಂದರು.

ಯಾದಗಿರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಭೀಮರಾಯನ ಗುಡಿ ಪೊಲೀಸ್ ಠಾಣೆಯ ನಿವೃತ್ತ ಆರಕ್ಷಕ ಉಪನಿರೀಕ್ಷಕ ದತ್ತಾತ್ರೇಯ ಮಾತನಾಡಿ, ಪೊಲೀಸ್ ಇಲಾಖೆಗೆ ಹೊಸದಾಗಿ ಸೇರ್ಪಡೆಯಾಗುವಂತಹ ಸಿಬ್ಬಂದಿ ಇಲಾಖೆಗೆ ಗೌರವ ತರುವ ನಿಟ್ಟಿನಲ್ಲಿ ಕೆಲಸ ಮಾಡಬೇಕೆಂದರು.

ವಿಜಯನಗರ ಜಿಲ್ಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಲ್ ಶ್ರೀಹರಿ ಬಾಬು ಮಾತನಾಡಿ, ಪೊಲೀಸ್ ಇಲಾಖೆಯಲ್ಲಿ ಅನೇಕ ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸೇವೆ ತ್ಯಾಗ ಮತ್ತು ಬಲಿದಾನಗಳನ್ನು ಸ್ಮರಿಸುವ ದಿನವೇ ಪೊಲೀಸ್ ಧ್ವಜ ದಿನಾಚರಣೆ ಎಂದು ಹೇಳಿದರು.
ವಿಜಯಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಟಿ. ಭೂಬಾಲನ್ ಮಾತನಾಡಿ, ಪೊಲೀಸ್ ಪೇದೆಯಿಂದ ಹಿಡಿದು ದೊಡ್ಡಮಟ್ಟದ ಅಧಿಕಾರಿಗಳ ಸೇವೆಯನ್ನು ಸ್ಮರಿಸಬೇಕು ಎಂದರು.

ಮಡಿಕೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನಿವೃತ್ತ ಸಿಪಿಐ ಎಚ್.ಜೆ.ಶಿವಶಂಕರಪ್ಪ ಮಾತನಾಡಿ, ಸಮಾಜದಲ್ಲಿ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆ, ಆಂತರಿಕ ಭದ್ರತೆ ಕಾಪಾಡುವಲ್ಲಿ ಪೊಲೀಸ್ ಅಧಿಕಾರಿಗಳ ಸೇವೆ ಪ್ರಶಂಸನೀಯವಾಗಿದೆ ಎಂದರು.

ಕೋಲಾರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೆಜಿಎಫ್ ಪೀಠದ ೩ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಗಣಪತಿ ಗುರುಸಿದ್ಧ ಬಾದಾಮಿ ಮಾತನಾಡಿ, ಸಾರ್ವಜನಿಕರ ನೆಮ್ಮದಿಗೆ ಧಕ್ಕೆಯಾಗದಂತೆ ದುಡಿಯುವ ಪೊಲೀಸರ ಸೇವೆ ಶ್ಲಾಘನೀಯ ಎಂದರು.

**<><*<><>*><>**

ರಾಜ್ಯದಲ್ಲಿ ಇದೇ ೨೬ರಂದು ನಡೆಯಲಿರುವ ಮೊದಲ ಹಂತದ ಲೋಕಸಭಾ ಚುನಾವಣೆಗೆ ಇಂದು ಒಟ್ಟು ೩೮ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ ಎಂದು ಮುಖ್ಯ ಚುನಾವಣಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ. ಇದರಲ್ಲಿ ೩೩ ಪುರುಷರು, ೫ ಮಹಿಳೆಯರು ಸೇರಿದ್ದಾರೆ. ಈವರೆಗೆ ೧೫೨ ನಾಮಪತ್ರ ಸಲ್ಲಿಕೆಯಾಗಿದೆ.

**<><*<><>*><>**

ರಾಜ್ಯದಲ್ಲಿ ಎರಡು ಹಂತದಲ್ಲಿ ನಡೆಯಲಿರುವ ಲೋಕಸಭಾ ಚುನಾವಣಾ ಪ್ರಚಾರ ಬಿರುಸುಗೊಳ್ಳುತ್ತಿದೆ. ಜಿಲ್ಲೆಗಳಲ್ಲಿ ಸ್ವೀಪ್ ಸಮಿತಿಯಿಂದ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿವೆ. ಮೇ ೭ ರಂದು ನಡೆಯಲಿರುವ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಬೇಕು ಎಂದು ಶಿವಮೊಗ್ಗ ಜಿಲ್ಲಾಧಿಕಾರಿ ಗುರುದತ್ ಹೆಗಡೆ ಹೇಳಿದ್ದಾರೆ. ಚುನಾವಣಾ ಅಕ್ರಮಗಳನ್ನು ತಡೆಗಟ್ಟಲು ಸಾರ್ವಜನಿಕರು ಸಿ-ವಿಜಿಲ್ ಆಪ್ ಮೂಲಕ ಕೈ ಜೋಡಿಸಬೇಕು ಎಂದು ಶಿವಮೊಗ್ಗ ಜಿಲ್ಲೆಯ ಸಹಾಯಕ ಆಯುಕ್ತ ಯತೀಶ್ ಮನವಿ ಮಾಡಿದ್ದಾರೆ.

ಕೋಲಾರ ಜಿಲ್ಲೆಯಲ್ಲಿ ಚುನಾವಣಾ ತರಬೇತಿಗೆ ನಿಯೋಜಿಸಲಾಗಿರುವ ಅಧಿಕಾರಿ ಮತ್ತು ಸಿಬ್ಬಂದಿ ಒಂದು ವೇಳೆ ಗೈರು ಹಾಜರಾದರೆ ಅವರ ವಿರುದ್ಧ ಕಠಿಣಕ್ರಮ ಕೈಗೊಳ್ಳುವುದಾಗಿ ಜಿಲ್ಲಾ ಚುನಾವಣಾಧಿಕಾರಿ ಅಕ್ರಂ ಪಾಷ ಹೇಳಿದ್ದಾರೆ.
ತುಮಕೂರು ಜಿಲ್ಲೆಯಲ್ಲಿ ಈಗಾಗಲೇ ಒಂದುವರೆ ಲಕ್ಷ ಮಕ್ಕಳು ತಮ್ಮ ಪೋಷಕರಿಗೆ ಪತ್ರ ಬರೆಯುವ ಮೂಲಕ ಮತದಾನದ ಜಾಗೃತಿ ಮೂಡಿಸಿದ್ದಾರೆ ಎಂದು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ಮತದಾರರ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕಾದರೆ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು. ಜಿಲ್ಲೆಯಲ್ಲಿ ಮತದಾನ ಪ್ರಮಾಣ ಹೆಚ್ಚಾಗಲೆಂದು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರನ್ನು ಚುನಾವಣಾ ರಾಯಭಾರಿಗಳನ್ನಾಗಿ ಗುರುತಿಸಲಾಗಿದೆ ಎಂದರು.

ಧಾರವಾಡದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಧಾರವಾಡದಲ್ಲಿ ಜಿಲ್ಲಾ ಮಟ್ಟದ ಮಾನವ ಸರಪಳಿ ಹಾಗೂ ಸಹಿ ಸಂಗ್ರಹಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಟಿ.ಕೆ. ಸ್ವರೂಪ ಹಾಗೂ ಹುಬ್ಬಳ್ಳಿ-

ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಸಹಿ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಇಂದು ಬಿಎಸ್‌ಪಿ ಮತ್ತು ಎಸ್‌ಯುಸಿಐ ಅಭ್ಯರ್ಥಿಗಳು ಹಾಗೂ ನಾಲ್ವರು ಪಕ್ಷೇತರ ಅಭ್ಯರ್ಥಿಗಳು ಸೇರಿ ಒಟ್ಟು ೦೬ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಇದೇ ೨೬ ರಂದು ಮತದಾನ ಜರುಗಲಿದ್ದು, ಈ ಹಿನ್ನಲೆಯಲ್ಲಿ ಮತದಾನಕ್ಕೆ ಬೇಕಾದ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ  ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಚುನಾವಣಾ ಕರ್ತವ್ಯದಿಂದ ವಿನಾಯಿತಿ ಅಥವಾ ಬದಲಾವಣೆ ಕೋರಿ ಬರುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. ಚುನಾವಣಾ ಕೆಲಸಕ್ಕೆ ಗೈರು ಹಾಜರಾದರೆ ಅವರ ವಿರುದ್ಧ ಕ್ರಮ ಜರುಗಿಸುವುದಾಗಿ ಜಿಲ್ಲಾಧಿಕಾರಿ ಹೇಳಿದರು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೇಂದ್ರ ಚುನಾವಣಾ ಆಯೋಗದ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಇಂದು ಜಿಲ್ಲೆಯ ಬಂಟ್ವಾಳ ತಾಲೂಕಿನ ಪಿಲಾತಬೆಟ್ಟು ಗ್ರಾಮ ಪಂಚಾಯತ್ ವ್ಯಾಪ್ತಿಯ ಮತಗಟ್ಟೆಗಳಿಗೆ  ಭೇಟಿ ನೀಡಿ ಪರಿಶೀಲಿಸಿದರು.

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ, ಹಿರೇಕೇರೂರು, ರಟ್ಟಿಹಳ್ಳಿ, ಅಬಲೂರು ಗ್ರಾಮದಲ್ಲಿ ಮತಯಾಚನೆ ಮಾಡಿದರು.

<><*<><>*><>

ಲೋಕಸಭಾ ಚುನಾವಣೆಗಾಗಿ ಮತದಾರರಲ್ಲಿ ಜಾಗೃತಿ ಮೂಡಿಸಲು ಬ್ಯಾಡ್ಮಿಂಟನ್ ಆಟಗಾರ ಅನುಪ್ ಶ್ರೀಧರ್, ನಟಿ ಹಾಗೂ ರೂಪದರ್ಶಿ ನೀತು ವನಜಾಕ್ಷಿ, ಚಿತ್ರನಟ ರಮೇಶ್ ಅರವಿಂದ್, ಟೇಬಲ್ ಟೆನಿಸ್ ಆಟಗಾರ್ತಿ ಅರ್ಚನಾ ಜಿ. ಕಾಮತ್, ಅವರುಗಳನ್ನು ನಮ್ಮ ಬೆಂಗಳೂರು ರಾಯಭಾರಿಗಳಾಗಿ ನೇಮಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಕೆಲಸಕ್ಕಾಗಿ ನೇಮಕಗೊಂಡಿರುವ ನಾಲ್ವರು ವ್ಯಕ್ತಿಗಳು ನಾಗರಿಕರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಲಿದ್ದಾರೆ. ಮತ ಚಲಾವಣೆ ಎಲ್ಲರ ಕರ್ತವ್ಯ ಮತ್ತು ಜವಾಬ್ದಾರಿ. ಮತಗಟ್ಟೆಗಳ ಬಳಿ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ಅವರು ಹೇಳಿದರು.

<><*<><>*><>

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಲಖನೌ ಸೂಪರ್ ಜೈಂಟ್ಸ್  ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಪಿಚ್ ಬ್ಯಾಟ್ಸ್‌ಮನ್‌ಗಳಿಗೆ ಅನುಕೂಲವಾಗಿರುವುದರಿಂದ ರನ್‌ಗಳ ಹೊಳೆ ಹರಿಯುವ ನಿರೀಕ್ಷೆಯಿದೆ. ಮೂರು ಪಂದ್ಯಗಳನ್ನಾಡಿರುವ ಬೆಂಗಳೂರು ತಂಡ ೧ರಲ್ಲಿ ಗೆದ್ದು ಎರಡರಲ್ಲಿ ಸೋತಿದೆ. ಅತ್ತ ಲಖನೌ ತಂಡ ಆಡಿರುವ ಎರಡು ಪಂದ್ಯಗಳಲ್ಲಿ ಗೆಲುವು- ಸೋಲಿನ ಮಿಶ್ರ ಫಲ ಅನುಭವಿಸಿದೆ.

<><*<><>*><>

ಉತ್ತರಕನ್ನಡ ಜಿಲ್ಲೆಯ ಹಳಿಯಾಳ ತಾಲೂಕನ್ನು ಬರಪಿಡಿತ ತಾಲೂಕು ಎಂದು ಘೋಷಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೀರಿನ ಮಹತ್ವ ಹಾಗೂ ನೀರು ಮಿತ ಬಳಕೆ ಕುರಿತು 'ಜಲ ಜಾಗೃತಿ ಅಭಿಯಾನ' ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಪರಶುರಾಮ ಘಸ್ತೆ ತಿಳಿಸಿದ್ದಾರೆ. ಈ ಅಭಿಯಾನದಲ್ಲಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಎಲ್ಲ ಗ್ರಾಮ ಪಂಚಾಯಿತಿಯ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಸಾರ್ವಜನಿಕರಿಗೆ ನೀರಿನ ಮಹತ್ವ ತಿಳಿಸುವ ಮೂಲಕ ನೀರಿನ ಮಿತ ಬಳಕೆ ಕುರಿತು ಜಾಗೃತಿ ಮೂಡಿಸಲಾಗುವುದು. ಮಳೆಗಾಲದ ಮುಂಗಾರು ಹಾಗೂ ಹಿಂಗಾರು ಮಳೆ ಕೊರತೆಯಿಂದ ಬೇಸಿಗೆಯಲ್ಲಿ ನೀರಿನ ಅಭಾವ ಹೆಚ್ಚಾಗಿದೆ ಎಂದರು.  ಇದಲ್ಲದೇ ಪಂಚಾಯಿತಿ ವ್ಯಾಪ್ತಿಯ ಶಾಲಾ ಮಕ್ಕಳಿಗೆ ಮಾಹಿತಿ, ಜಾಥಾ, ಕರಪತ್ರ ಹಂಚಿಕೆ, ಬೀದಿನಾಟಕ, ಸಭೆಗಳು ಹಾಗೂ ಸಾರ್ವಜನಿಕರಿಗೆ ನೀರಿನ ಮಹತ್ವದ ಕುರಿತು ಮಾಹಿತಿ ನೀಡಲಾಗುತ್ತಿದೆ. ಜಲಜಾಗೃತಿ ಅಭಿಯಾನಕ್ಕೆ ಎಲ್ಲರೂ ಕೈಜೋಡಿಸುವ ಮೂಲಕ ಯಶಸ್ವಿಗೊಳಿಸೋಣ ಎಂದು ಹೇಳಿದರು.

<><*<><>*><>

ಹಾವೇರಿ ಜಿಲ್ಲೆಯ ಹಾವೇರಿ, ರಾಣೇಬೆನ್ನೂರು, ಬ್ಯಾಡಗಿ, ಹಿರೇಕೆರೂರು, ರಟ್ಟಿಹಳ್ಳಿ ತಾಲೂಕುಗಳಲ್ಲಿ ತುಂಗಭದ್ರಾ ನದಿ ಪಾತ್ರಕ್ಕೆ ಹೊಂದಿಕೊಂಡ ನಗರ, ಪಟ್ಟಣ ಹಾಗೂ ಗ್ರಾಮಗಳಲ್ಲಿ ನದಿ ಪಾತ್ರದಲ್ಲಿ ಬರುವ ಅನಧಿಕೃತ ಪಂಪ್‌ಸೆಟ್‌ಗಳ ತೆರವುಗೊಳಿಸಲು ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ ಆದೇಶ ಹೊರಡಿಸಿದ್ದಾರೆ. ಕುಡಿಯುವ ನೀರು ಪೂರೈಕೆಗಾಗಿ ಭದ್ರಾ ಜಲಾಶಯದಿಂದ ಏಪ್ರಿಲ್ ೬ ರವರೆಗೆ ತುಂಗಭದ್ರಾ ನದಿಗೆ ನೀರು ಹರಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಜಲಾಶಯದಲ್ಲಿ ನೀರಿನ ಲಭ್ಯತೆ ಗಣನೀಯವಾಗಿ ಕಡಿಮೆಯಿದ್ದು, ಲಭ್ಯವಿರುವ ನೀರನ್ನು ಮಿತವಾಗಿ ಬಳಸಬೇಕು ಎಂದರು. ಜಿಲ್ಲೆಯ ಹಾವೇರಿ, ರಾಣೇಬೆನ್ನೂರು, ಬ್ಯಾಡಗಿ, ಹಿರೇಕೆರೂರು, ರಟ್ಟಿಹಳ್ಳಿ ತಾಲೂಕುಗಳಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರನ್ನು ಪೂರೈಸುವುದು ಅತ್ಯಾವಶ್ಯವಾಗಿರುವುದರಿಂದ ತುಂಗಭದ್ರಾ ನದಿಯ ಪಾತ್ರದಲ್ಲಿ ಬರುವ ಅನಧಿಕೃತ ಪಂಪ್‌ಸೆಟ್‌ಗಳನ್ನು ತೆರವುಗೊಳಿಸಲು, ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

**<><*<><>*><>**

**ಈಗ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಮಾಹಿತಿ :**

**ವರದಿಯನ್ನು ಸಿದ್ಧಪಡಿಸಿರುವವರು: ನಮ್ಮ ಜಿಲ್ಲಾ ಪ್ರತಿನಿಧಿ, ಮಂಜುನಾಥ ಗುಡಿಸಾಗರ**

ಹಾವೇರಿ ಜಿಲ್ಲೆಯ ೫ ಹಾಗೂ ಗದಗ ಜಿಲ್ಲೆಯ ೩ ವಿಧಾನಸಭಾ ಕ್ಷೇತ್ರಗಳನ್ನೊಳಗೊಂಡ ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆ ಎರಡನೇ ಹಂತದಲ್ಲಿ ನಡೆಯಲಿದ್ದು, ಪಾರದರ್ಶಕ ಹಾಗೂ ನ್ಯಾಯಸಮ್ಮತವಾಗಿ ನಡೆಸಲು ಎಲ್ಲ ಸಿದ್ಧತೆಗಳನ್ನು ಹಾವೇರಿ ಜಿಲ್ಲಾಡಳಿತ ಕೈಗೊಂಡಿದೆ. ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಏಪ್ರಿಲ್ ೧೨ರಂದು ಅಧಿಸೂಚನೆ ಹೊರಡಿಸಲಾಗುತ್ತದೆ. ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಆರಂಭಗೊಳ್ಳಲಿದ್ದು, ಎಪ್ರೀಲ್ ೧೯ ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನಾಂಕವಾಗಿದೆ. ಏಪ್ರಿಲ್ ೨೦ ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ಏಪ್ರಿಲ್ ೨೨ ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಮೇ ೦೭ ರಂದು ಮತದಾನ ನಡೆಯಲಿದ್ದು, ಜುನ್ ೦೪ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು ೧೭ ಲಕ್ಷದ ೭೭ ಸಾವಿರ ೮೭೭ ಮತದಾರಿದ್ದಾರೆ. ಈ ಪೈಕಿ ೮೫ ವರ್ಷ ಮೇಲ್ಪಟ್ಟ ೧೫ ಸಾವಿರ ೫೨೧ ಮತದಾರರು, ೨೭ ಸಾವಿರ ೪೩೪ ವಿಶೇಷಚೇತನ ಮತದಾರರು, ೧ ಸಾವಿರ ೬೦೭ ಸೇವಾ ಮತದಾರರು ಹಾಗೂ ೧೮ರಿಂದ ೧೯ ವರ್ಷದ ೫೦ ಸಾವಿರ ೬೫೮ ಮತದಾರರಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯಾದ್ಯಂತ ಒಣಹವೆ ಮುಂದುವರೆದಿದೆ. ಕಲಬುರಗಿಯಲ್ಲಿ ದಿನದ ಗರಿಷ್ಠ ೪೧.೬ ಡಿಗ್ರಿ ಸೆಲ್ಸಿಯೆಸ್ ತಾಪಮಾನ ದಾಖಲಾಗಿದೆ.

ಮುನ್ಸೂಚನೆಯಂತೆ ಮುಂದಿನ ೨೪ ಗಂಟೆಗಳಲ್ಲಿ ರಾಜ್ಯಾದ್ಯಂತ ಒಣಹವೆ ಮುಂದುವರೆಯಲಿದೆ.

ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣ. ಗರಿಷ್ಠ ೩೬, ಕನಿಷ್ಠ ೨೪ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.